ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 30/12/2019

# ಬಿಎಸ್‌ವೈ ವಿದೇಶ ಪ್ರವಾಸ ಅಧಿವೇಶನ ಮುಂದೂಡಿಕೆ

**ಬೆಂಗಳೂರು:** ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ವಿದೇಶ ಪ್ರವಾಸಕ್ಕೆ ತೆರಳುತ್ತಿರುವ ಹಿನ್ನೆಲೆಯಲ್ಲಿ ಜನವರಿಯಲ್ಲಿ ನಡೆಯಬೇಕಿದ್ದ ಜಂಟಿ ವಿಧಾನಮಂಡಲ ಅಧಿವೇಶನವನ್ನು ಮುಂದೂಡಲಾಗಿದೆ.



ಜನವರಿಯಲ್ಲಿ ಸ್ವಿಟ್ಜರ್‌ಲೆಂಡ್‌ನಲ್ಲಿ ನಡೆಯಲಿರುವ ಆರ್ಥಿಕ ಸಮ್ಮೇಳನದಲ್ಲಿ ಎಲ್ಲ ರಾಜ್ಯಗಳ ಮುಖ್ಯಮಂತ್ರಿಗಳು ಭಾಗವಹಿಸಲಿದ್ದು, ಜನವರಿ 20ರಿಂದ 24ರವರೆಗೆ ಮುಖ್ಯಮಂತ್ರಿ ಯಡಿಯೂರಪ್ಪ ಕೂಡ ಸ್ವಿಟ್ಜರ್‌ಲೆಂಡ್ ಪ್ರವಾಸಕ್ಕೆ ತೆರಳಲಿದ್ದಾರೆ. ಹೀಗಾಗಿ ಜನವರಿ 20ರಂದು ನಿಗದಿಯಾಗಿದ್ದ ಜಂಟಿ ಅಧಿವೇಶನವನ್ನು ಜನವರಿ 27ಕ್ಕೆ ಮುಂದೂಡಲಾಗಿದೆ.

ಬಿಜೆಪಿ ಸರಕಾರ ಮೊದಲು ಜನವರಿ 20ರಂದು ಜಂಟಿ ಅಧಿವೇಶನ ನಡೆಸಲು ತೀರ್ಮಾನಿಸಿತ್ತು. ಬಳಿಕ ಜನವರಿ 27ರಂದು ಅಧಿವೇಶನ ಪ್ರಾರಂಭಿಸಲು ಬಿಎಸ್‌ವೈ ಚಿಂತನೆ ನಡೆಸಿದ್ದರು.

ಈ ಹಿಂದೆ ಸಚಿವ ಸಂಪುಟ ಸಭೆಯಲ್ಲಿ ಜನವರಿ 20ರಿಂದ 30ರವರೆಗೆ 10 ದಿನಗಳ ಕಾಲ ಅಧಿವೇಶನ ನಡೆಸಲು ನಿರ್ಧಾರ ಮಾಡಲಾಗಿತ್ತು. ಈಗ ಏಳು ದಿನ ಮುಂದೂಡಿದ್ದರಿಂದ ಮತ್ತೊಮ್ಮೆ ಸಚಿವ ಸಂಪುಟ ಸಭೆಯಲ್ಲಿ ಚರ್ಚೆ ಮಾಡಿ ತೀರ್ಮಾನ ಕೈಗೊಳ್ಳಬೇಕು. ಮುಂಬರುವ ಸಚಿವ ಸಂಪುಟ ಸಭೆಯಲ್ಲಿ ಸರಕಾರ ಈ ಬಗ್ಗೆ ಅಂತಿಮ ತೀರ್ಮಾನ ಕೈಗೊಳ್ಳಲಿದೆ.